## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ.

### ವಿಷಯ

ದೈಹಿಕ ಶಿಕ್ಷಣ ಪರಿವೀಕ್ಷಕರ ಗ್ರೂಪ್ –ಬಿ ಹುದ್ದೆಯಿಂದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗೆ ಮುಂಬಡ್ತಿಯ ಸಲುವಾಗಿ ಒಟ್ಟು 38 ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ರಾಜ್ಯದಲ್ಲಿ ಪ್ರಸ್ತುತ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಒಟ್ಟು 38 ಹುದ್ದೆಗಳ ಪೈಕಿ 27 ಹುದ್ದೆಗಳು ಖಾಲಿ ಇರುತ್ತದೆ. 2016ರಲ್ಲಿ ದೈಹಿಕ ಶಿಕ್ಷಣ ಪರಿವೀಕ್ಷಕರ ಹುದ್ದೆಯಿಂದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗೆ ಮುಂಬಡ್ತಿ ನೀಡಿ, ತದನಂತರ ಜೂನ್ – 2021ರಲ್ಲಿ ಸದರಿ ಹುದ್ದೆಗಳಿಗೆ ಮುಂಬಡ್ತಿ ನೀಡಿರುವುದರಿಂದ ಪ್ರಸ್ತುತ ಮುಂಬಡ್ತಿ ನೀಡಲು ಅರ್ಹ ಅಧಿಕಾರಿಗಳು ಲಭ್ಯವಾಗಿರುವುದಿಲ್ಲ. ಕಾರಣ ದೈಹಿಕ ಶಿಕ್ಷಣ ಪರಿವೀಕ್ಷಕರ ಹುದ್ದೆಯಲ್ಲಿ ಕನಿಷ್ಠ 3 ವರ್ಷಗಳ ಸೇವೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕೆಂದು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿಳಿಸಲಾಗಿದೆ. ಸದರಿ ಹುದ್ದೆಗಳು ಖಾಲಿ ಇರುವುದರಿಂದ ಕ್ರೀಡಾ ಕೂಟಗಳನ್ನು ನಡೆಸಲು ಹಾಗೂ ಕ್ರೀಡಾ ಚಟುವಟಿಕೆಗಳಿಗೆ ತೊಂದರೆಯಾಗುತ್ತಿದೆ. ಆದ ಕಾರಣ, ಈ ಒಂದು ಬಾರಿಗೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿನಾಯಿತಿ ನೀಡಿ, 2 ವರ್ಷ ಪೂರೈಸಿರುವ ಅರ್ಹ ದೈಹಿಕ ಶಿಕ್ಷಣ ಪರಿವೀಕ್ಷಕರುಗಳಿಗೆ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗೆ ಕಾರ್ಯಕಾರಿ ಆದೇಶ ನೀಡುವ ಕುರಿತಾದ ಗಂಭೀರ ಸಮಸ್ಯೆಯನ್ನು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

### ಉತ್ತರ

1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 30 ಡಿಪಿಐ 2013 ದಿನಾಂಕ:07/05/2016ರಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಗ್ರೂಪ್ ಎ ಕಿರಿಯ ಶ್ರೇಣಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ವೃಂದದ ನೇಮಕಾತಿ ಕಾರ್ಯ ವಿಧಾನವನ್ನು ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ. ಸದರಿ ತಿದ್ದುಪಡಿ ನಿಯಮಗಳನ್ವಯ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ವೃಂದದ ಹುದ್ದೆಗೆ ಬಡ್ತಿ ಹೊಂದಲು ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರ ಹುದ್ದೆಯಲ್ಲಿ ಕನಿಷ್ಠ 3 ವರ್ಷಗಳ ಅರ್ಹತಾದಾಯಕ ಸೇವೆಯನ್ನು ನಿಗಧಿಪಡಿಸಲಾಗಿರುತ್ತದೆ.

| SI No | Cadre and Pay Scale | No of Posts | Method of Recruitment | Minimum Qualification |
|---|---|---|---|---|
| 01 | District Physical Education Officer-Office of the Deputy Director of Public Instruction,(Adminstration)/ Senior Assitant Director in the Office of the KSEAB/DSERT/CPI Bengaluru<br><br>(52,650-97,100) | 34+3 | By promotion from the cadre of Physical Education Inspectors in the Block Education Office. | Must have put in a service of not less than 5years in the cadre of Physical Education Inspectors in the Block Education Office:<br><br>Provided that if an official who has put in service of not less than 5 years in not available, then an official who have put in not less than 3 years of service may be considered for promotion." |

2. ಪ್ರಸ್ತುತ ಗ್ರೂಪ್–"ಎ" ಕಿರಿಯ ಶ್ರೇಣಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ 38 (ವಿಜಯನಗರ ಜಿಲ್ಲೆಗೆ ಹೊಸದಾಗಿ ಮಂಜೂರಾಗಿರುವ ಹುದ್ದೆ ಸೇರಿ) ಹುದ್ದೆಗಳು ಮಂಜೂರಾಗಿವೆ. ಈ ಪೈಕಿ ಪ್ರಸ್ತುತ 26 ಹುದ್ದೆಗಳು ಖಾಲಿ ಇರುತ್ತವೆ.

3. ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಹುದ್ದೆಗೆ ಬಡ್ತಿ ಹೊಂದಲು ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು ಮತ್ತು ತತ್ಸಮಾನ ಹುದ್ದೆಯಲ್ಲಿ ಕನಿಷ್ಠ 3 ವರ್ಷಗಳ ಅರ್ಹತಾದಾಯಕ ಸೇವೆಯನ್ನು ಹೊಂದಿರಬೇಕಾಗಿರುವುದರಿಂದ, ಪ್ರಸ್ತುತ 2021ರಲ್ಲಿ ಗ್ರೇಡ್–1 ದೈಹಿಕ ಶಿಕ್ಷಣ ಶಿಕ್ಷಕರಿಂದ ದೈಹಿಕ ಶಿಕ್ಷಣ ಪರಿವೀಕ್ಷಕರ ಹುದ್ದೆಗೆ ಬಡ್ತಿ ಹೊಂದಿರುವವರನ್ನು ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಹುದ್ದೆಯ ಬಡ್ತಿಗೆ ಪರಿಗಣಿಸಲು ನಿಯಮಗಳನ್ವಯ ಅವಕಾಶವಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಇಪಿ 85 ಡಿಎಆರ್ 2023

(ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು.